<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

<u>ಸಿಸಿ ನಂ**. 900/2022**</u>

ಚಾಸಾ-5  ಫ್ರಾಸಾ-5

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 18-11-2025

| | | |
|---|---|---|
| ಹೆಸರು | : | ಬಸವರಾಜ |
| ತಂದೆಯ  ಹೆಸರು | : | ಧರೆಪ್ಪ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಬೋಸುಗಾ |

-: <u>ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-</u>

ಚಾಸಾ 1, 6 ಪರಿಚಯ ಇರುವುದಿಲ್ಲ.

ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 14-12-2021 ರಂದು ಮದ್ಯಾಹ್ನ 2-30 ಗಂಟೆಗೆ ನಾನು ಚಾಸಾ 6 ರವರು ಹೊಲಕ್ಕೆ ಹೋಗುತ್ತಿರುವಾಗ ಚಾಸಾ 1 ರವರ ಹೊಲದಲ್ಲಿ ಜಗಳ ಆಗುವುದು ಶಬ್ದ ಕೇಳಿ ನಾವು ಅಲ್ಲಿಗೆ ಹೋಗಿರುತ್ತೇವೆ ಎಂದರೆ ಸರಿಯಲ್ಲ. ಚಾಸಾ  1 ರವರ ಹೊಲದಲ್ಲಿ ಆರೋಪಿತರು ಕಬ್ಬು ಕಟಾವು

ಮಾಡುತ್ತಿದ್ದು ಮತ್ತು ಚಾಸಾ 1 ರವರಿಗೆ ಆರೋಪಿತರೆಲ್ಲರೂ ಅವಾಚ್ಯ ಶಬ್ದಗಳಿಂದ ಬೈಯ್ಯುತ್ತಿದ್ದರು ಎಂದರೆ ಸರಿಯಲ್ಲ. ನಾನುಮತ್ತು ಚಾಸಾ 6 ರವರು ಜಗಳ ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಈ ಪ್ರಕರಣದ ಎಲ್ಲಾ ವಿಷಯ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ಶ್ರೀ **SGH** ವಕೀಲರಿಂದಃ-

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

ಮರು ವಿಚಾರಣೆಃ - ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ